ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 853 |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್. ಎಸ್ ಗೋಪಿನಾಥ್ |
| 3 | ಉತ್ತರಿಸುವ ದಿನಾಂಕ | 26/12/2022 |
| 4 | ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ಹೊಸದಾಗಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಉದ್ದೇಶಿತ ಕಾಲೇಜುಗಳು ಪ್ರಾರಂಭವಾಗುವುದು ಯಾವಾಗ; (ವಿವರ ನೀಡುವುದು) | ಕೇಂದ್ರದ ನೀತಿ ಆಯೋಗದನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡುವ ಬಗ್ಗೆ ಅವಕಾಶ ಕಲ್ಪಿಸಲಾಗಿದೆ.<br><br>ಸರ್ಕಾರಿ ವೈದ್ಯಕೀಯ ಕಾಲೇಜುಗಳಿಲ್ಲದ ದಾವಣಗೆರೆ, ಉಡುಪಿ, ಕೋಲಾರ, ರಾಮನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಬಾಗಲಕೋಟೆ, ದಕ್ಷಿಣ ಕನ್ನಡ, ಹೊಸಪೇಟೆ ಮತ್ತು ವಿಜಯಪುರ ಈ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ. ಅದರಂತೆ ಪ್ರಾಥಮಿಕವಾಗಿ ದಾವಣಗೆರೆ, ಉಡುಪಿ, ಕೋಲಾರ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಬಗ್ಗೆ ಐಡೆಕ್ (iDeCK) ಸಂಸ್ಥೆಯ ಸಹಯೋಗದೊಂದಿಗೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸುವ ಹಂತದಲ್ಲಿದೆ. ಈ ಬಗ್ಗೆ ಕಾಲಮಿತಿಯನ್ನು ನಿಗದಿಪಡಿಸಿರುವುದಿಲ್ಲ. |
| ಆ) | ರಾಜ್ಯದಲ್ಲಿನ ವಿದ್ಯಾರ್ಥಿಗಳು ನೀಟ್ ಪರೀಕ್ಷೆ ಬರೆದು ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ದಾಖಲಾತಿ ದೊರೆಯದೇ ಹೊರ ರಾಜ್ಯಗಳಿಗೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿನ ವೈದ್ಯಕೀಯ ಕಾಲೇಜುಗಳಲ್ಲಿ ಲಭ್ಯವಿರುವ ಸೀಟುಗಳಿಗೆ ಸೀಮಿತವಾಗಿ, ನೀಟ್ ರ್‍ಯಾಂಕಿಂಗ್ ಆಧಾರದ ಮೇಲೆ ಸೀಟು ಹಂಚಿಕೆ ಮಾಡಲಾಗುತ್ತಿದೆ. ಕಡಿಮೆ ನೀಟ್ ರ್‍ಯಾಂಕಿಂಗ್ ಹೊಂದಿದ ಅಭ್ಯರ್ಥಿಗಳು ಹೊರ ರಾಜ್ಯಗಳಲ್ಲಿ ಪ್ರವೇಶಾತಿ ಬಯಸುತ್ತಾರೆ. |
| ಇ) | ರಾಜ್ಯದಲ್ಲಿರುವ ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿನ ದುಬಾರಿ ಶುಲ್ಕದ ಕಾರಣ ನಮ್ಮ ರಾಜ್ಯದ ಪೋಷಕರು ಅವರ ಮಕ್ಕಳನ್ನು ಹೊರ ರಾಜ್ಯಗಳ ಮೆಡಿಕಲ್ ಕಾಲೇಜುಗಳಿಗೆ ದಾಖಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯ ಸರ್ಕಾರ ಮತ್ತು ಖಾಸಗಿ ವೈದ್ಯಕೀಯ ಸಂಸ್ಥೆಗಳ ಸಂಘಟನೆಗಳ ಪಧಾಧಿಕಾರಿಗಳೊಂದಿಗೆ ಸುಧೀರ್ಘವಾಗಿ ಚರ್ಚಿಸಿ ಸಮ್ಮತಾಭಿಪ್ರಾಯದ ಒಪ್ಪಂದದಂತೆ ಶುಲ್ಕವನ್ನು ಭರಿಸಬೇಕಿರುತ್ತದೆ. ಸದರಿ ಒಪ್ಪಂದದಂತೆ ಖಾಸಗಿ ವೈದ್ಯಕೀಯ ಸಂಸ್ಥೆಗಳಲ್ಲಿ ಸರ್ಕಾರಿ ಖೋಟಾದ ಸೀಟುಗಳಿಗೆ ಸರ್ಕಾರ ನಿಗದಿಪಡಿಸಿದ ಶುಲ್ಕದೊಂದಿಗೆ ಪ್ರವೇಶಾತಿ ಹೊಂದಲು ಅವಕಾಶ ಕಲ್ಪಿಸಿದೆ.<br><br>ಖಾಸಗಿ ಸಂಸ್ಥೆಗಳು ಸಮ್ಮತಾಭಿಪ್ರಾಯದ ಒಪ್ಪಂದದಲ್ಲಿ ನಿಗದಿಪಡಿಸಿದ ಶುಲ್ಕಕ್ಕಿಂತ ಹೆಚ್ಚಿನ ಶುಲ್ಕವನ್ನು ವಿಧಿಸಿದಲ್ಲಿ, ಈ ಬಗ್ಗೆ " ಪ್ರವೇಶ ಮೇಲ್ವಿಚಾರಣಾ ಸಮಿತಿ"ಗೆ ದೂರು ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. |
| ಈ) | ಹಾಗಿದ್ದಲ್ಲಿ, ಈ ಬಗ್ಗೆ ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ದುಬಾರಿ ಶುಲ್ಕಕ್ಕೆ ಕಡಿವಾಣ ಹಾಕಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು? (ವಿವರ ನೀಡುವುದು) | |

ಸಂಖ್ಯೆ: ಎಂಇಡಿ 685 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ
ಶಿಕ್ಷಣ ಸಚಿವರು



Generated from eOffice by DR.K SUDHAKAR, MED-MIN(SK), MINISTER, MEDICAL EDUCATION SEC on 16/12/2022 06 35 PM